## 9. ಕುಳಿತೇ ಮಾತನಾಡುವಂತೆ ಸ್ಪೀಕರ್ ಓಂ ಬಿರ್ಲಾ ಮನವಿ

ಕೊರೋನಾ ಸಾಂಕ್ರಾಮಿಕ ರೋಗದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸದನದಲ್ಲಿ ಸದಸ್ಯರು ಸಾಮಾಜಿಕ ಅಂತರ ಕಾಯ್ದುಕೊಂಡು, ಆಸನಗಳಲ್ಲಿ ಕುಳಿತೇ ಮಾತನಾಡುವಂತೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸದಸ್ಯರಲ್ಲಿ ಮನವಿ ಮಾಡಿದ್ದಾರೆ.

18 ದಿನಗಳ ಮುಂಗಾರು ಅಧಿವೇಶನ ಆರಂಭವಾಗಿದ್ದು, ಲೋಕಸಭೆ ಮತ್ತು ರಾಜ್ಯಸಭೆ ಕಲಾಪಗಳು ಎರಡು ಪಾಳಿಯಲ್ಲಿ ನಡೆಯಲಿವೆ. ಮೊದಲ ದಿನ ಲೋಕಸಭೆ ಕಲಾಪ ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಿತು. ನಂತರ ರಾಜ್ಯಸಭೆ ಕಲಾಪ ಮಧ್ಯಾಹ್ನ 3 ಗಂಟೆಯಿಂದ ಸಂಜೆ 7ರವರೆಗೆ ನಡೆಯಿತು. ಉಳಿದ ದಿನಗಳಲ್ಲಿ ರಾಜ್ಯಸಭೆ ಬೆಳಿಗ್ಗೆ ಹಾಗೂ ಸಂಜೆ ಲೋಕಸಭೆ ಕಲಾಪ ನಡೆಯಲಿದೆ. ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಉಭಯ ಸದನಗಳನ್ನು ಸದಸ್ಯರ ಅನುಕೂಲಕ್ಕಾಗಿ ಮತ್ತು ಸುರಕ್ಷತೆಗಾಗಿ ಬಳಸಿಕೊಳ್ಳಲಾಗುತ್ತಿದೆ. ಕೆಲವು ಸದಸ್ಯರಿಗೆ ಸಂದರ್ಶಕರ ಗ್ಯಾಲರಿಯಲ್ಲಿ ಆಸನ ವ್ಯವಸ್ಥೆ ಮಾಡಲಾಗಿದೆ. ಎಲ್ಲ ಸದಸ್ಯರು ಕೊರೋನಾ ಹರಡುವುದನ್ನು ತಡೆಗಟ್ಟುವುದರೊಂದಿಗೆ ಕಲಾಪ ಸುಗುಮವಾಗಿ ನಡೆಯಲು ಅನುವು ಮಾಡಿಕೊಡಬೇಕು ಎಂದು ಸ್ಪೀಕರ್ ಬಿರ್ಲಾ ಮನವಿ ಮಾಡಿದರು. ತಜ್ಞರ ಸಲಹೆ ಮೇರೆಗೆ ಸದನದಲ್ಲಿ ಎಲ್ಲರೂ ಕುಳಿತುಕೊಂಡೇ ಮಾತನಾಡಬೇಕು. ಇದರಿಂದ ನಿಮಗೆಲ್ಲರಿಗೂ ತುಂಬಾ ತೊಂದರೆಯಾಗಬಹುದು. ಇದೊಂದು ಮಾರ್ಗವನ್ನು ಬಿಟ್ಟರೆ ಬೇರೆ ಆಯ್ಕೆ ಇಲ್ಲ ಎಂದು ಸ್ಪೀಕರ್ ಹೇಳಿದ್ದಾರೆ. ಕೊರೋನಾ ಸಂಕಷ್ಟದ ನಡುವೆಯೂ ಈ ಬಾರಿಯ ಅಧಿವೇಶನ ನಡೆಯುತ್ತಿದೆ. ಪಕ್ಷಗಳ ಸದಸ್ಯ ಬಲದ ಆಧಾರದ ಮೇಲೆ ಸದಸ್ಯರ ಸುರಕ್ಷತೆಗಾಗಿ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಸದಸ್ಯರು ಕುಳಿತೇ ಮಾತನಾಡಬೇಕು ಎಂದು ವಿನಂತಿ ಮಾಡಿಕೊಳ್ಳುತ್ತೇನೆ ಎಂದಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಟ್ಟಾಗಿ ಕೆಲಸ ಮಾಡುವುದರಿಂದ ದೇಶವು ಕೊರೋನಾವನ್ನು ಸೋಲಿಸಲು ಸಾಧ್ಯವಾಗುತ್ತದೆ ಎಂದು ಓಂ ಬಿರ್ಲಾ ಹೇಳಿದ್ದಾರೆ.

ಆಧಾರ:ವಿಶ್ವವಾಣಿ, ದಿನಾಂಕ:15.09.2020